# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : **1542** |
| 2 | ಸದಸ್ಯರ ಹೆಸರು | : ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : 21.03.2025 |
| 4 | ಉತ್ತರಿಸುವ ಸಚಿವರು | : ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ವಿಧಾನಸಭೆಯಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ ವಿಧಾನ ಪರಿಷತ್ತಿನ ಸದಸ್ಯರು ನೋಡಲ್ ಜಿಲ್ಲೆಗಳನ್ನು ಆಯ್ಕೆ ಮಾಡಿಕೊಂಡಿದ್ದರೂ ಸಹ ಆ ನೋಡಲ್ ಜಿಲ್ಲೆ ವ್ಯಾಪ್ತಿಯನ್ನೊಳಗೊಂಡ ಪ್ರದೇಶಾಭಿವೃದ್ಧಿ ಮಂಡಳಿಗಳ ಸಭೆಗಳಿಗೆ ವಿಧಾನ ಪರಿಷತ್ ಸದಸ್ಯರನ್ನು ಆಹ್ವಾನಿಸದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು ಬಂದಿದೆ.<br>ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿಯ ಅಧಿನಿಯಮ 1991 ಮತ್ತು ನಿಯಮಗಳು 1993, ಅಧಿನಿಯಮ ಸಂಖ್ಯೆ:36 ಅಧ್ಯಾಯ-II ರ 3(ಎ)ರ ಪ್ರಕಾರ ಹಾಗೂ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗಳ ಅಧಿನಿಯಮ 1994 ಮತ್ತು ನಿಯಮಗಳು 1996, ಅಧಿನಿಯಮ ಸಂಖ್ಯೆ:38 ರ ಅಧ್ಯಾಯ-II ರ 3(ಎ)ರ ಪ್ರಕಾರ ಮಲೆನಾಡು/ಬಯಲುಸೀಮೆ ಪ್ರದೇಶವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ ಮಂಡಳಿಯ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಮಂಡಲದ ಸದಸ್ಯರು ಮಂಡಳಿಯ ಸದಸ್ಯರಾಗಿರುತ್ತಾರೆ.<br>ರಾಜ್ಯ ವಿಧಾನಸಭೆಯ ಸದಸ್ಯರಿಂದ ಚುನಾಯಿತರಾದ ವಿಧಾನ ಪರಿಷತ್ ಸದಸ್ಯರು ಮಂಡಳಿ ವ್ಯಾಪ್ತಿಯ ಜಿಲ್ಲೆಗಳನ್ನು ನೋಡಲ್ ಜಿಲ್ಲೆಗಳನ್ನಾಗಿ ಆಯ್ಕೆ ಮಾಡಿಕೊಂಡಾಗ, ಅಂತಹವರನ್ನು ಮಂಡಳಿಯ ಸದಸ್ಯರನ್ನಾಗಿ ಪರಿಗಣಿಸುವ ಬಗ್ಗೆ ಸಚಿವ ಸಂಪುಟ ಸಭೆಯ ಟಿಪ್ಪಣಿಯನ್ನು ಸಿದ್ಧಪಡಿಸಿ, ಯೋಜನಾ ಸಚಿವರ ಅನುಮೋದನೆಯೊಂದಿಗೆ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಇಲಾಖೆ ಹಾಗೂ ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆದು ದಿನಾಂಕ:12.07.2023 ರಂದು ಸಚಿವ ಸಂಪುಟದ ಅನುಮೋದನೆಗಾಗಿ ಮಂಡಿಸಲಾಗಿತ್ತು. ಆದರೆ, ದಿನಾಂಕ: 13.07.2023 ರಂದು ನಡೆದ ಸಚಿವ ಸಂಪುಟದ ಸಭೆಯಲ್ಲಿ ಸದರಿ ಪ್ರಸ್ತಾವನೆಯನ್ನು ಕೈಬಿಡಲು ನಿರ್ಧರಿಸಲಾಗಿರುತ್ತದೆ. ಆದ್ದರಿಂದ ವಿಧಾನಸಭಾ ಸದಸ್ಯರಿಂದ ಚುನಾಯಿತರಾದ ವಿಧಾನ ಪರಿಷತ್ ಸದಸ್ಯರುಗಳು ಮಂಡಳಿ ವ್ಯಾಪ್ತಿಯ ಜಿಲ್ಲೆಗಳನ್ನು ನೋಡಲ್ ಜಿಲ್ಲೆಗಳನ್ನಾಗಿ ಆಯ್ಕೆ ಮಾಡಿಕೊಂಡಾಗ ಮಂಡಳಿಯ ಸದಸ್ಯರನ್ನಾಗಿ ಪರಿಗಣಿಸಲು ಅವಕಾಶ ಇರುವುದಿಲ್ಲ. |

| | | |
|---|---|---|
| (ಆ) | ಬಂದಿದ್ದರೆ, ಆಹ್ವಾನಿಸದೆ ಇರಲು ಕಾರಣಗಳೇನು; | ಮಲೆನಾಡು ಪ್ರದೇಶಾಭಿವೃದ್ಧಿ ಮಂಡಳಿ ಹಾಗೂ ಬಯಲುಸೀಮೆ ಪ್ರದೇಶಾಭಿವೃದ್ಧಿ ಮಂಡಳಿಗಳ ಕಾಯ್ದೆಯಲ್ಲಿ ಅವಕಾಶವಿಲ್ಲದೇ ಇರುವುದರಿಂದ ಹಾಗೂ ಅವಕಾಶ ಕಲ್ಪಿಸಲು ಸಲ್ಲಿಸಿದ್ದ ಪ್ರಸ್ತಾವನೆಯನ್ನು ಸಚಿವ ಸಂಪುಟದಿಂದ ಕೈಬಿಡಲಾಗಿರುವುದರಿಂದ ಅವಕಾಶವಿರುವುದಿಲ್ಲ. |
| (ಇ) | ನೋಡಲ್ ಜಿಲ್ಲೆಯ ವ್ಯಾಪ್ತಿಯನ್ನೊಳಗೊಂಡ ಸಭೆಗಳಿಗೆ ಕ್ಷೇತ್ರಗಳಿಲ್ಲದ ವಿಧಾನ ಪರಿಷತ್ತಿನ ಶಾಸಕರನ್ನು ಆಹ್ವಾನಿಸಲು ಸರ್ಕಾರ ಕ್ರಮ ಕೈಗೊಳ್ಳುವುದೆ? (ವಿವರ ಒದಗಿಸುವುದು) | ಸಚಿವ ಸಂಪುಟದಿಂದ ಕೈಬಿಡಲಾಗಿರುವುದರಿಂದ ಅವಕಾಶವಿರುವುದಿಲ್ಲ. |

ಸಂಖ್ಯೆ: ಪಿಡಿಎಸ್ 21 ಎಂಡಿಬಿ 2025

**(ಡಿ. ಸುಧಾಕರ್)**
ಯೋಜನೆ, ಕಾರ್ಯಕ್ರಮ ಸಂಯೋಜನೆ
ಮತ್ತು ಸಾಂಖ್ಯಿಕ ಸಚಿವರು